# ಕರ್ನಾಟಕ ಸರ್ಕಾರ

## ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು ಜಿಲ್ಲಾಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಅಡುಗೆಯವರು/ಅಡುಗೆ ಸಹಾಯಕರ ಹುದ್ದೆಗಳ ನೇರ ನೇಮಕಾತಿ ಸಮಿತಿ ಮಂಡ್ಯ ಜಿಲ್ಲೆ. ಮಂಡ್ಯ.

ಸಂಖ್ಯೆ:ಬಿಸಿಎಂ.6/ಸಿಬ್ಬಂದಿ/ಸಿಆರ್.72/2016-17. ದಿನಾಂಕ:19.11.2016.

## * ಪ್ರಕಟಣೆ *

ಮಂಡ್ಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್ ಡಿ ವೃಂದದ ಅಡುಗೆಯವರು ಹಾಗೂ ಅಡುಗೆ ಸಹಾಯಕರು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ, ಸದರಿ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು **19.11.2016**ಕ್ಕೆ ಹಾಗೂ ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ:**21.11.2016**ನ್ನು ನಿಗಧಿಪಡಿಸಿ ದಿನಾಂಕ:**20.10.2016** ರಂದು ಅಧಿಸೂಚನೆಯನ್ನು ಹೊರಡಿಸಲಾಗಿತ್ತು.

ಸದರಿ ಅಧಿಸೂಚನೆಯಲ್ಲಿ ನಿಗಧಿಪಡಿಸಿದ್ದ ದಿನಾಂಕಗಳನ್ನು ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 90 ಬಿಇಬಿ 2016 (ಭಾಗ-2), ದಿನಾಂಕ:18.11.2016 ರಲ್ಲಿ ಪರಿಷ್ಕರಿಸಿ ಆದೇಶ ಹೊರಡಿಸಿರುವುದರಿಂದ, ಸದರಿ ಗ್ರೂಪ್ ಡಿ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಹಾಗೂ ಅರ್ಜಿ ಶುಲ್ಕವನ್ನು ಪಾವತಿಸುವ ದಿನಾಂಕಗಳನ್ನು ಕೆಳಕಂಡಂತೆ ಪರಿಷ್ಕರಿಸಲಾಗಿರುತ್ತದೆ.

| ಕ್ರ.ಸಂ | ಪ್ರಕ್ರಿಯೆಗಳು | ಪರಿಷ್ಕರಿಸಿದ ದಿನಾಂಕ |
|---|---|---|
| 1 | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ | **30.11.2016.** |
| 2 | ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ | **01.12.2016.** (ಮಧ್ಯಾಹ್ನ 3.00 ಗಂಟೆಯೊಳಗೆ) |

ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು
ಜಿಲ್ಲಾಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ
ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಅಡುಗೆಯವರು/ಅಡುಗೆ ಸಹಾಯಕರ
ಹುದ್ದೆಗಳ ನೇರ ನೇಮಕಾತಿ ಸಮಿತಿ, ಮಂಡ್ಯ ಜಿಲ್ಲೆ.

ಜಿಲ್ಲಾ ಅಧಿಕಾರಿಗಳ ಕಛೇರಿ,
ಹಿಂದುಳಿದ ವರ್ಗಗಳ ಮತ್ತು
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಮಂಡ್ಯ ಜಿಲ್ಲೆ, ಮಂಡ್ಯ.

1ನೇ ಮಹಡಿ, ಸರ್ಕಾರಿ ಕಛೇರಿಗಳ
ಸಮುಚ್ಚಯ, ಹಳೇ ತಹಸೀಲ್ದಾರ್ ಕಛೇರಿ
ಹತ್ತಿರ, ಹೆಚ್.ಕೆ.ವೀರಣ್ಣಗೌಡ ರಸ್ತೆ,
ಮಂಡ್ಯ – 571401,
ದೂರವಾಣಿ ಸಂ: 08232-220835,
Fax No.239517,
E-Mail:dobcmmandya@gmail.com

ಸಂಖ್ಯೆ:ಬಿಸಿಎಂ.6/ಸಿಬ್ಬಂದಿ/ಸಿಆರ್.72/2016-17. ದಿನಾಂಕ:21.11.2016.

ಜಿಲ್ಲಾ ಸೂಚನ ವಿಜ್ಞಾನಾಧಿಕಾರಿ,
ರಾಷ್ಟ್ರೀಯ ಮಾಹಿತಿ ಕೇಂದ್ರ (ಎನ್.ಐ.ಸಿ),
ಜಿಲ್ಲಾ ಪಂಚಾಯತ್,
ಮಂಡ್ಯ ಜಿಲ್ಲೆ,
ಮಂಡ್ಯ.

ಮಾನ್ಯರೆ,

ವಿಷಯ:- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್ ಡಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ಅರ್ಜಿ ಸಲ್ಲಿಸುವ ಹಾಗೂ ಅರ್ಜಿ ಶುಲ್ಕ ಪಾವತಿಯ ಕೊನೆಯ ದಿನಾಂಕಗಳನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ: ಹಿಂವಕ 336 ಬಿಇಟಿ 2015 ದಿನಾಂಕ: 05.11.2015.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 90 ಬಿಇಟಿ 2016 (ಭಾಗ-2) ದಿನಾಂಕ: 29/09/2016.
4. ಈ ಕಛೇರಿ ಸಮಸಂಖ್ಯೆ ಅಧಿಸೂಚನೆ ದಿನಾಂಕ: 20.10.2016.
5. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 90 ಬಿಇಟಿ 2016 (ಭಾಗ-2), ದಿನಾಂಕ:18.11.2016.
6. ಈ ಕಛೇರಿ ಸಮಸಂಖ್ಯೆ ಪತ್ರಿಕಾ ಪ್ರಕಟಣೆ ದಿನಾಂಕ:19.11.2016.

*****

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(4)ರ ಅಧಿಸೂಚನೆಯಲ್ಲಿ ಮಂಡ್ಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್ ಡಿ ವೃಂದದ **ಅಡುಗೆಯವರು** ಹಾಗೂ **ಅಡುಗೆ ಸಹಾಯಕರು** ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ, ಸದರಿ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 19.11.2016ಕ್ಕೆ ಹಾಗೂ ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ:21.11.2016ನ್ನು ನಿಗಧಿಪಡಿಸಿ ಅಧಿಸೂಚನೆಯನ್ನು ಹೊರಡಿಸಲಾಗಿತ್ತು.

ಉಲ್ಲೇಖ(4)ರ ಅಧಿಸೂಚನೆಯಲ್ಲಿ ನಿಗಧಿಪಡಿಸಿದ್ದ ದಿನಾಂಕಗಳನ್ನು ಉಲ್ಲೇಖ(5)ರ ಸರ್ಕಾರದ ತಿದ್ದುಪಡಿ ಆದೇಶದಲ್ಲಿ ಪರಿಷ್ಕರಿಸಿ ಆದೇಶ ಹೊರಡಿಸಿರುವುದರಿಂದ ಸದರಿ ಗ್ರೂಪ್ ಡಿ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಹಾಗೂ ಅರ್ಜಿ ಶುಲ್ಕವನ್ನು ಪಾವತಿಸುವ ದಿನಾಂಕಗಳನ್ನು ಮಾರ್ಪಡಿಸಿ ಉಲ್ಲೇಖ(6)ರಲ್ಲಿ ಹೊರಡಿಸಿರುವ ಪತ್ರಿಕಾ ಪ್ರಕಟಣೆಯನ್ನು ಮಂಡ್ಯ ಜಿಲ್ಲಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಮ್ಮಲ್ಲಿ ಕೋರಿದೆ. ಪತ್ರಿಕಾ ಪ್ರಕಟಣೆಯನ್ನು ಈ ಕೂಡ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

21/11/16

ಜಿಲ್ಲಾ ಅಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿಗಳು,
ಜಿಲ್ಲಾಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ
ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ
ಅಡುಗೆಯವರು/ಅಡುಗೆ ಸಹಾಯಕರ ಹುದ್ದೆಗಳ
ನೇರ ನೇಮಕಾತಿ ಸಮಿತಿ
ಮಂಡ್ಯ ಜಿಲ್ಲೆ.